ಗಂಗಾಧರ ಬಸವನಹಳ್ಳಿಯಲ್ಲಿ ವಿದ್ಯಾರ್ಥಿಗಳು, ಗ್ರಾಮಸ್ಥರ ಪರದಾಟ

ಸತತ ಮಳೆ: ಕೆಸರುಗದ್ದೆಯಾದ ರಸ್ತೆಗಳು

ಸಂ.ಕ. ಸಮಾಚಾರ ಪಿರಿಯಾಪಟ್ಟಣ

ತಾಲ್ಲೂಕಿನಾದ್ಯಂತ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಗಂಗಾಧರ ಬಸವನಹಳ್ಳಿ ಗ್ರಾಮದ ರಸ್ತೆಗಳು ಕೆಸರು ಗದ್ದೆಯಾಗಿ ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ದ್ವಿಚಕ್ರ ವಾಹನ ಸವಾರರು ಪರದಾಡುವಂತಾಗಿದ್ದು ಕೂಡಲೇ ರಸ್ತೆ ಮತ್ತು ಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ತಾಲೂಕಿನ ಚಿಟ್ಟೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗಾಧರ ಬಸವನಹಳ್ಳಿ ಗ್ರಾಮ ಪಟ್ಟಣದಿಂದ ಕೇವಲ 6 ಕಿ.ಮೀ ಮಾತ್ರ ಇದ್ದು, ಕಂದೇಗಾಲ, ತೆಲುಗಿನಕುಪ್ಪೆ, ಕೋಮಲಾಪುರ, ಬೆಕ್ಕರೆ, ಭುವನಹಳ್ಳಿ ಎಂ.ಹೊಸಹಳ್ಳಿ, ಕಾನೂರು, ಕೆ, ಹರಳಹಳ್ಳಿ ಸೇರಿದಂತೆ ಅನೇಕ ಗ್ರಾಮಗಳಿಗೆ ಇದು ಸಂಪರ್ಕ ರಸ್ತೆಯಾಗಿದೆ. ಇಲ್ಲಿ ದಿನನಿತ್ಯ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ದ್ವಿಚಕ್ರ ವಾಹನಗಳು ಸೇರಿದಂತೆ ಸಾವಿರಾರು ಜನರು ನಿತ್ಯದ ಕೆಲಸಕಾರ್ಯಗಳಿಗೆ

> ಕಳೆದ 5 ವರ್ಷಗಳಲ್ಲಿ ಗ್ರಾಪಂ ಹಾಗೂ ಶಾಸಕರ ಅನುದಾನದಲ್ಲಿ ಹಲವು ರಸ್ತೆಗಳನ್ನು ಅಭಿವೃದ್ಧಿ ಪಡಿಸಿದರೂ ಇನ್ನು ಅನೇಕ ರಸ್ತೆ ಹಾಗೂ ಚರಂಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗಿಲ್ಲ. ಅನುದಾನಕ್ಕಾಗಿ ಸಚಿವರಲ್ಲಿ ಮನವಿ ಮಾಡಿದ್ದು, ಮಂಜೂರಾತಿ ಸಿಕ್ಕ ಕೂಡಲೇ ಅಭಿವೃದ್ಧಿ ಪಡಿಸಲಾಗುವುದು.
>
> – ನಾರಾಯಣ್, ಗ್ರಾಪಂ ಸದಸ್ಯರು ಜಿ. ಬಸವನಹಳ್ಳಿ

ತೆರಳಲು ಅವಲಂಬಿಸಿದ್ದಾರೆ. ದಿನದ ಬೆಳಗ್ಗೆ ಶಾಲಾ ಉಡುಪಿನಲ್ಲಿ ತಯಾರಾಗಿ ಹೊರಡುವ ಪುಟಾಣಿ ಮಕ್ಕಳು ಹಾಗೂ ಕಾಲೇಜು ವಿದ್ಯಾರ್ಥಿಗಳು ಹದಗೆಟ್ಟ ರಸ್ತೆಯಲ್ಲಿ ಶಾಲೆಗೆ ತೆರಳಬೇಕಾದ ಅನಿವಾರ್ಯತೆ ಎದುರಾಗಿದೆ. ಒಂದೆಡೆ ರಸ್ತೆ ಮೇಲೆ ಕೆಸರು, ಇನ್ನೊಂದೆಡೆ ಭಾರದ ಪಠ್ಯಚೀಲ ಹಿಡಿದು ಸಮತೋಲನದಿಂದ ಸಾಗಬೇಕು. ಒಂದು ವೇಳೆ ಬೈಕ್ ಸವಾರರು ಪಕ್ಕದಿಂದ ಹಾಯ್ದು ಹೋದರೆ ಬಟ್ಟೆಗಳೆಲ್ಲಾ ಕೆಸರುಮಯವಾಗಲಿದ್ದು, ಶಾಲಾ ಮಕ್ಕಳ ಗೋಳು ಕೇಳುವವರು ಯಾರು ಎಂಬ ಪ್ರಶ್ನೆ ಎದುರಾಗಿದೆ. ಇನ್ನೂ ಕೆಲವು ಬೈಕ್ ಸವಾರರು ಈ ರಸ್ತೆಗೆ ಬಂದರೆ ಸರ್ಕಸ್ ಮಾಡುತ್ತಲೇ ಸಾಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ಸುಗಮ ಸಂಚಾರಕ್ಕೆ ನೆರವಾಗಬೇಕಾದ ಗ್ರಾಮ ಪಂಚಾಯಿತಿ ಜನರ ಮೊಳೆ ಮುರಿಯಲು ಸಜ್ಜಾಗಿದೆಯೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಿಂದ ವ್ಯಕ್ತವಾಗಿದೆ.

ಪ್ರತಿ ಬಾರಿ ಮಳೆ ಬಿದ್ದರೂ ರಸ್ತೆ ಈ ಸ್ಥಿತಿಗೆ ಬರುವುದು ನಿಯಮವಾಗಿಬಿಟ್ಟಿದೆ. ಗ್ರಾಮದ ಅಭಿವೃದ್ಧಿಗೆ ಪಂಚಾಯಿತಿ ವತಿಯಿಂದ ಅನೇಕ ರೀತಿಯ ಅನುದಾನ ಮತ್ತು ಸೌಲಭ್ಯಗಳನ್ನು ಕಲ್ಪಿಸಿದ್ದರೂ ಪೂರ್ಣಪ್ರಮಾಣದ ಸೌಲಭ್ಯಗಳು ಸಮರ್ಪಕವಾಗಿ ದೊರೆತಿಲ್ಲ ಹಾಗಾಗಿ ಶಾಸಕರ ಹಾಗೂ ಸಂಸದರ ಅನುದಾನದಲ್ಲಿ ಅಗತ್ಯ ರಸ್ತೆ ಚರಂಡಿ ನಿರ್ಮಿಸಿಕೊಟ್ಟರೆ ಜನತೆ ನೆಮ್ಮದಿಯಿಂದ ಬದುಕಲು ಸಾಧ್ಯ ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಕೆಟ್ಟು ನಿಂತ ಬೀದಿ ದೀಪಗಳು | ರಾತ್ರಿ ಓಡಾಟ ದುಸ್ತರ

ಮೂಲ ಸೌಲಭ್ಯ ಇಲ್ಲದ ಬಡಾವಣೆ

ಸಂ.ಕ. ಸಮಾಚಾರ ನಂಜನಗೂಡು

ತಾಲೂಕಿನ ದೇವಿರಮ್ಮನಹಳ್ಳಿ ರಸ್ತೆಗೆ ತೆರಳುವ ಮುಖ್ಯ ರಸ್ತೆಯಲ್ಲಿರುವ ಪ್ರಭಾಕರ್ ಹಾಗೂ ರಾಮನಾಥ್ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಗಳು ಮರೀಚಿಕೆಯಾಗಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.

ಈ ಎರಡೂ ಬಡಾವಣೆಗಳಲ್ಲಿ ಸುಮಾರು ತಿಂಗಳುಗಳಿಂದ ಬೀದಿ ದೀಪಗಳು ಕೆಟ್ಟು ನಿಂತಿವೆ. ವಿದ್ಯುತ್ ದೀಪ ಇಲ್ಲದೆ ರಾತ್ರಿಯ ಸಮಯದಲ್ಲಿ ನಿವಾಸಿಗಳು ಓಡಾಡಲು ತೊಂದರೆಯಾಗಿದೆ. ಅಲ್ಲದೆ ಬಡಾವಣೆಗಳಲ್ಲಿ ಚರಂಡಿ ಮತ್ತು ರಸ್ತೆ ಇಲ್ಲದೆ ಕೊಳಚೆ ನೀರು ರಸ್ತೆಯಲ್ಲಿಯೇ ಹರಿಯುತ್ತಿದೆ. ಇದರಿಂದ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ಸಂಚರಿಸಲು ರಸ್ತೆ ಇಲ್ಲದೆ ನಿವಾಸಿಗಳು ಹರಸಹಾಸ ಪ್ರತಿನಿತ್ಯ ಪಡಬೇಕಾಗಿದೆ.

ರಸ್ತೆಯಲ್ಲಿ ಶಾಲಾ ಮಕ್ಕಳು ಮತ್ತು ವಯೋವೃದ್ಧರು ಬಿದ್ದು ಗಾಯಗೊಂಡಿರುವ ಸಾಕಷ್ಟು ಉದಾಹರಣೆಗಳಿವೆ. ಗಿಡಗಂಟಿಗಳು ಬೆಳೆದುಕೊಂಡು ಹಾವು ಚೇಳುಗಳ ವಾಸಸ್ಥಾನವಾಗಿದೆ ಎಂದು ಅಳಲನ್ನು ತೋಡಿಕೊಂಡಿದ್ದು, ಬೀದಿದೀಪಗಳನ್ನು ಅಳವಡಿಸುವಂತೆ ರಸ್ತೆ ಮತ್ತು ಚರಂಡಿಯನ್ನು ನಿರ್ಮಾಣ ಮಾಡಿಕೊಡುವಂತೆ ಹಲವು ಬಾರಿ ಸಂಬಂಧಪಟ್ಟ ನಗರಸಭೆಯ ಅಧಿಕಾರಿಗಳು ಮತ್ತು ಸ್ಥಳೀಯ ಜನಪ್ರತಿನಿಧಿಗಳಿಗೆ ಹಾಗೂ ಶಾಸಕರಿಗೆ ತಿಳಿಸಿದ್ದೇವೆ ಆದರೂ ಯಾವುದೇ ಪ್ರಯೋಜನವಾಗಿಲ್ಲ. ಈ ಕೂಡಲೇ ನಮಗೆ ಬೀದಿ ದೀಪಗಳನ್ನು ಅಳವಡಿಸಿ ಕೊಡಬೇಕು.

> ನಾವು ಈ ಬಡಾವಣೆಗಳಲ್ಲಿ ಕಳೆದ 20 ವರ್ಷಗಳಿಂದಲೂ ವಾಸ ಮಾಡುತ್ತಿದ್ದೇವೆ. ಆದರೂ ಕೂಡ ನಗರಸಭೆಯಿಂದ ಯಾವುದೇ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಟ್ಟಿಲ್ಲ. ಪ್ರಮುಖವಾಗಿ ರಸ್ತೆ, ಚರಂಡಿ, ಬೀದಿ ದೀಪಗಳ ವ್ಯವಸ್ಥೆ ಇಲ್ಲ. ನಮ್ಮ ಬಡಾವಣೆಯ ಬೀದಿಯನ್ನು ನೋಡಿದರೆ ಗ್ರಾಮಾಂತರ ಭಾಗದ ಹಳ್ಳಿಗಳೆ ಉತ್ತಮ ಎನಿಸುತ್ತದೆ. ಸಂಬಂಧಪಟ್ಟವರು ತಕ್ಷಣವೇ ಸೌಲಭ್ಯಗಳನ್ನು ಒದಗಿಸಲಿ.
>
> – ಶ್ರೀಕಂಠಮೂರ್ತಿ, ನಿವಾಸಿ ಪ್ರಭಾಕರ್ ಬಡಾವಣೆ

ರಸ್ತೆ ಮತ್ತು ಚರಂಡಿಯನ್ನು ನಿರ್ಮಾಣ ಮಾಡಿಕೊಳ್ಳಬೇಕು. ಚರಂಡಿ ನೀರು ಸರಾಗವಾಗಿ ಹರಿಯುವಂತೆ ಮಾಡಬೇಕು. ಇಲ್ಲವಾದಲ್ಲಿ ನಗರಸಭೆಗೆ ನಿವಾಸಿಗಳು ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಬೈಕ್‌ಗೆ ಬಸ್ ಡಿಕ್ಕಿ: ಸವಾರ ಸಾವು

ಸಂ.ಕ.ಸಮಾಚಾರ ಹನೂರು

ಕೌದಳ್ಳಿ ಗ್ರಾಮದ ಸಮೀಪ ಬೈಕ್‌ಗೆ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಗ್ರಾಮದ ಪೀಟರ್ಸ್ ಕಾಲೋನಿಯ ನಿವಾಸಿ ಜೀವನ್ (18) ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ.

ಗ್ರಾಮದ ಪೆಟ್ರೋಲ್ ಬಂಕ್‌ನಲ್ಲಿ ದ್ವಿಚಕ್ರ ವಾಹನಕ್ಕೆ ಪೆಟ್ರೋಲ್ ಹಾಕಿಸಿಕೊಳ್ಳಲು ತೆರಳುತ್ತಿದ್ದಾಗ ಮಹದೇಶ್ವರ ಬೆಟ್ಟದಿಂದ ಆಗಮಿಸುತ್ತಿದ್ದ ಸಾರಿಗೆ ಬಸ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ತೀವ್ರವಾಗಿ ಗಾಯಗೊಂಡ ಯುವಕ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ. ಸ್ಥಳದಲ್ಲಿ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಈ ಸಂಬಂಧ ರಾಮಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪತ್ನಿ ಹತ್ಯೆ: ಪತಿಗೆ ಜೀವಾವಧಿ ಶಿಕ್ಷೆ

ಸಂ.ಕ.ಸಮಾಚಾರ ಚಾಮರಾಜನಗರ

ಶೀಲ ಶಂಕಿಸಿ ಪತ್ನಿಯನ್ನು ಹತ್ಯೆ ಮಾಡಿದ್ದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮುಡಿಗುಂಡ ಗ್ರಾಮದ ಕುಮಾರ್‌ಗೆ ಜೀವಾವಧಿ ಶಿಕ್ಷೆ ವಿಧಿಸಿ ಕೊಳ್ಳೇಗಾಲದ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತೀರ್ಪು ನೀಡಿದೆ.

ಸುಮಾರು 10 ವರ್ಷಗಳ ಹಿಂದೆ ಮುಳ್ಳೂರು ಗ್ರಾಮದ ಚಿನ್ನಮ್ಮ ಅವರನ್ನು ಕುಮಾರ್ ಮದುವೆಯಾಗಿದ್ದ. ಈ ಮಧ್ಯೆ ಹೆಂಡತಿ ಚಿನ್ನಮ್ಮಳ ಶೀಲ ಶಂಕಿಸಿ ಪದೇ ಪದೇ ಅನುಮಾನಪಡುತ್ತಿದ್ದ. ಗಂಡನ ಕಾಟ ತಾಳಲಾರದೇ ಚಿನ್ನಮ್ಮ ತವರು ಮನೆಯಲ್ಲೇ ಉಳಿದುಕೊಂಡಿದ್ದಳು.

ಈ ವೇಳೆ ಕುಮಾರ್ ತವರು ಮನೆಗೆ ಹೋಗಿ ಚೆನ್ನಾಗಿ ನೋಡಿಕೊಳ್ಳುವುದಾಗಿ ನಂಬಿಸಿ ಹೆಂಡತಿ ಹಾಗೂ ಪುತ್ರನನ್ನು ಮನೆಗೆ ವಾಪಸ್ ಕರೆದುಕೊಂಡು ಬಂದಿದ್ದ. ಆದರೆ ಹಳೆಯ ಚಾಳಿ ಬಿಡದ ಆರೋಪಿ ಕುಮಾರ್ ಚಿನ್ನಮ್ಮಳ ಮೇಲೆ ಹಲ್ಲೆ ಮಾಡಿ ಕೊಲೆ ಮಾಡಿದ್ದ.

ಗಾಂಜಾ ಮಾರಾಟ: ಇಬ್ಬರ ಬಂಧನ

ಸಂ.ಕ. ಸಮಾಚಾರ ಗುಂಡ್ಲುಪೇಟೆ

ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಗುಂಡ್ಲುಪೇಟೆ ಪೊಲೀಸರು ಸುಮಾರು 1 ಕೆ.ಜಿ 60 ಗ್ರಾಂ ಒಣ ಗಾಂಜಾ ಸಮೇತ ಬಂಧಿಸಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ಪಟ್ಟಣದ ಜಾಕೀರ್ ಹುಸೇನ್ ನಗರದ ಸಲ್ಮಾನ್ ಮತ್ತು ಇಮ್ರಾನ್ ಬಂಧಿತ ಆರೋಪಿಗಳು. ಪಟ್ಟಣದಲ್ಲಿ ಮಂಗಳವಾರ ರಾತ್ರಿ ಗಸ್ತು ನಡೆಸುತ್ತಿದ್ದ ವೇಳೆ ಪೋಲಿಸ್ ಇನ್ಸ್‌ಪೆಕ್ಟರ್ ಜಯಕುಮಾರ್ ನೇತೃತ್ವದ ತಂಡ ಸುಲ್ತಾನ್ ಬತ್ತೇರಿ ರಸ್ತೆಯ ಜಾಕೀರ್ ಹುಸೇನ್ ನಗರದ ಗೌತಮ್ ಕಾಲೇಜ್ ಮುಂಭಾಗ ದಾಳಿ ನಡೆಸಿತು. ಈ ವೇಳೆ ದ್ವಿಚಕ್ರ ವಾಹನದಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದವರನ್ನು ಬಂಧಿಸಲಾಗಿದೆ.

ಟಿ.ನರಸೀಪುರ ಪುರಸಭೆ ತೆರಿಗೆ ವಂಚನೆ | ಆಡಿಯೋ ವೈರಲ್

ಮುಖ್ಯಾಧಿಕಾರಿಗೆ ಪೊಲೀಸ್ ನೋಟಿಸ್

ಸಂ.ಕ. ಸಮಾಚಾರ ಮೈಸೂರು

ಟಿ.ನರಸೀಪುರ ಪುರಸಭೆ ತೆರಿಗೆ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಾಧಿಕಾರಿ ಮಾತನಾಡಿರುವ ಆಡಿಯೋ ಭಾರೀ ಸದ್ದು ಮಾಡಿದ್ದು ಪೊಲೀಸ್ ಅಧಿಕಾರಿಗಳು ಕಾರಣ ಕೇಳಿ ಮುಖ್ಯಾಧಿಕಾರಿಗೆ ನೋಟಿಸ್ ಜಾರಿ ಮಾಡಿದ್ದಾರೆ. ಇದರಿಂದ ತೆರಿಗೆ ವಂಚನೆ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಂತಾಗಿದೆ.

ಮುಖ್ಯಾಧಿಕಾರಿ ವಸಂತಕುಮಾರಿ ಮಾತನಾಡಿರುವ ಆಡಿಯೋದಿಂದ ಗೊಂದಲ ಸೃಷ್ಟಿಯಾಗಿದ್ದು ಇದರ ಬಗ್ಗೆ ಸ್ಪಷ್ಟನೆ ನೀಡುವಂತೆ ಪೊಲೀಸರು ನೀಡಿರುವ ನೋಟಿಸ್‌ಗೆ ಯಾವ ರೀತಿ ಉತ್ತರ ನೀಡುತ್ತಾರೆಂಬುದು ಕುತೂಹಲಕ್ಕೆ ಎಡೆ ಮಾಡಿಕೊಟ್ಟಿದೆ.

ಏನಿದು ಪ್ರಕರಣ

ಕೆಲವು ಆಸ್ತಿ ಮಾಲೀಕರದೊಂದಿಗೆ ಸೇರಿಕೊಂಡು ಪುರಸಭೆ ಸದಸ್ಯ ನಂಜುಂಡಸ್ವಾಮಿ ತೆರಿಗೆ ವಂಚಿಸುವ ಉದ್ದೇಶದಿಂದ ಕೆನರಾ ಬ್ಯಾಂಕಿನ ನಕಲಿ ಸೀಲ್ ಬಳಕೆ ಮಾಡಿಕೊಂಡು 3 ಕೋಟಿ 43 ಲಕ್ಷ ರೂಪಾಯಿ ವಂಚಿಸಿದ್ದಾರೆಂದು ವಸಂತಕುಮಾರಿ ಪೊಲೀಸರಿಗೆ ಜುಲೈ 19ರಂದು ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಜುಲೈ 23 ರಂದು ನಂಜುಂಡಸ್ವಾಮಿಯನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದರು. ನ್ಯಾಯಾಲಯ ನ್ಯಾಯಾಂಗ ಬಂಧನದಲ್ಲಿಡುವಂತೆ ಸೂಚನೆ ನೀಡಿದೆ.

ಆಡಿಯೋದಲ್ಲಿ ಏನಿದೆ

ಸೇವಾಶ್ರಯ ಫೌಂಡೇಷನ್ ಟ್ರಸ್ಟ್ ಅಧ್ಯಕ್ಷ ಮಣಿಕಂಠರಾಜ್ ಗೌಡ ಮುಖ್ಯಾಧಿಕಾರಿಯೊಂದಿಗೆ ಮಾತನಾಡಿರುವ 57 ನಿಮಿಷದ ಆಡಿಯೋ ಇದೀಗ ವೈರಲ್ ಆಗಿದೆ. ಮಣಿಕಂಠ ಅವರು, ತೆರಿಗೆ ವಂಚನೆ 30 ಲಕ್ಷ ಆಗಿರಬಹುದಾ ಮೇಡಂ ಎಂದು ಕೇಳುತ್ತಾರೆ. ಇದಕ್ಕೆ ಮುಖ್ಯಾಧಿಕಾರಿಗಳು, ಏನು ಹೇಳುತ್ತಿದ್ದಿರಿ 30 ರಿಂದ 40 ಕೋಟಿ ಮಾಡಿದ್ದಾರೆ. ಗ್ರಾಮಪಂಚಾಯಿತಿ ಇರುವ ಕಾಲದಿಂದಲೂ ಮಾಡಲಾಗಿದೆ. ನಾವು 3 ರಿಂದ 4 ಸಾವಿರ ಖಾತೆ ಮಾಡಿದ್ದೆವೆ. ಇದರಲ್ಲಿ ಒಂದು ಸಾವಿರ ಖಾತೆ ಇವನ್ನದೆ ಇದೆ ಎಂದು ಹೇಳಿರುವುದು ಇದೀಗ ಚರ್ಚೆಗೆ ಗ್ರಾಸವಾಗಿದೆ.

ತನಿಖೆ ವೇಳೆಯಲ್ಲಿ ಈ ಹೇಳಿಕೆ ಏಕೆ

ತನಿಖೆ ನಡೆಯುತ್ತಿರುವ ವೇಳೆಯಲ್ಲಿ ಏಕೆ ಹೀಗೆ ಮಾತನಾಡಿದ್ದಿರಿ. ಆಡಿಯೋದಲ್ಲಿರುವ ಧ್ವನಿ ನಿಮ್ಮದೆ. ನೀವು ನೀಡಿರುವ ದೂರಿಗೂ ನಿಮ್ಮ ಆಡಿಯೋದಲ್ಲಿನ ವಂಚನೆ ಮೊತ್ತಕ್ಕೂ ಭಾರೀ ವ್ಯತ್ಯಾಸ ಇದೆ. ಈ ಬಗ್ಗೆ ಉತ್ತರ ನೀಡುವಂತೆ ಇನ್ಸ್‌ಪೆಕ್ಟರ್ ನೋಟಿಸ್‌ನಲ್ಲಿ ತಿಳಿಸಿದ್ದಾರೆ.

ಪರಿಸರ ರಕ್ಷಣೆಗೆ ಮೊದಲ ಆದ್ಯತೆ ನೀಡಿ: ರೋಷನ್

ಸಂ.ಕ.ಸಮಾಚಾರ ಹನೂರು

ಪರಿಸರವನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಜನರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಪರಿಸರ ಸರಂಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಕ್ರಿಸ್ತರಾಜ ಶಿಕ್ಷಣ ಸಂಸ್ಥೆ ವ್ಯವಸ್ಥಾಪಕ ಫಾದರ್ ರೋಷನ್ ತಿಳಿಸಿದರು.

ಪಟ್ಟಣದ ಕ್ರಿಸ್ತರಾಜ ಶಿಕ್ಷಣ ಸಂಸ್ಥೆಯಲ್ಲಿ ಪರಿಸರದ ಬಗ್ಗೆ ಅರಿವು ಮೂಡಿಸುವ ಸಂಬಂಧ ಗ್ರೀನ್ ಕ್ಯಾಂಪಸ್, ಕ್ಲೀನ್ ಕ್ಯಾಂಪಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮನುಷ್ಯ ಕೆಲಸದ ಒತ್ತಡದಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾನೆ. ಆದ್ದರಿಂದ ಪ್ರತಿಯೊಬ್ಬರೂ ಆರೋಗ್ಯ

ಉತ್ತಮವಾಗಿಸಿಕೊಳ್ಳುವ ಕಡೆಗೆ ಗಮನ ಹರಿಸಬೇಕಿದೆ. ಇದಕ್ಕೆ ಹಸಿರು ಪರಿಸರ ಸಹಕಾರಿಯಾಗಲಿದೆ. ಈ ದಿಸೆಯಲ್ಲಿ ನಮ್ಮ ಸಂಸ್ಥೆಯು ಹಸಿರೀಕರಣಕ್ಕೆ ಹೆಚ್ಚಿನ ಒತ್ತನ್ನು ನೀಡುವುದರ ಜೊತೆಗೆ ಸ್ವಚ್ಛತೆ ಕಾಪಾಡಲಾಗುತ್ತಿದೆ ಎಂದರು.

ನಂತರ ಆರ್‌ಎಫ್‌ಒ ಉಮಾಪತಿ ಮಾತನಾಡಿ, ಪರಿಸರ ಸಂರಕ್ಷಣೆ ಎಲ್ಲರ ಆದ್ಯ ಕರ್ತವ್ಯ. ಹಾಗಾಗಿ ಪ್ರತಿಯೊಬ್ಬರೂ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಪರಿಸರ ಅರಿವು ಕುರಿತು ವಿದ್ಯಾರ್ಥಿಗಳು ಜಾಥಾ ನಡೆಸಿದರು. ನೃತ್ಯ, ನಾಟಕ ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಸಿಸ್ಟರ್ ಶಾಂತಿ, ಮುಖ್ಯಶಿಕ್ಷಕರಾದ ಸುಬ್ರಹ್ಮಣ್ಯ, ಸಿಸ್ಟರ್ ಜೆಸಿಂತಾ, ಪುಷ್ಪಾ, ಉಪನ್ಯಾಸಕರು ಇದ್ದರು.

ವಿದ್ಯುತ್ ತಂತಿ ಸ್ಪರ್ಶಿಸಿ ವ್ಯಕ್ತಿ ಸಾವು

ಸಂ.ಕ.ಸಮಾಚಾರ ಯಳಂದೂರು

ಮನೆಯ ಮೇಲೆ ಬಿದ್ದಿದ ವಿದ್ಯುತ್ ತಂತಿಯನ್ನು ಕೈಯಿಂದ ಸ್ಪರ್ಶಿಸಿ ವ್ಯಕ್ತಿಯೊಬ್ಬ ಮೃತಪಟ್ಟಿರುವ ಘಟನೆ ತಾಲೂಕಿನ ಅಂಬಳೆ ಗ್ರಾಮದ ಲಿಂಗಾಯಿತ ಬಡಾವಣೆಯಲ್ಲಿ ನಡೆದಿದೆ.

ತಾಲೂಕಿನ ಕಂದಹಳ್ಳಿ ಗ್ರಾಮದ ನಾಗರಾಜು(28) ಮೃತಪಟ್ಟ ವ್ಯಕ್ತಿ. ಈತ ಅಂಬಳೆ ಗ್ರಾಮದ ಮಾಸ್ಟರ್ ವಿಶ್ವನಾಥ್ ಎಂಬುವರ ಮನೆಯ ಮೇಲೆ ತೆರಳಿ ಬದಿಯಲ್ಲಿ ಹಾದಿ ಹೋಗಿರುವ 11 ಕೆವಿ ಸಂಪರ್ಕದ ವಿದ್ಯುತ್ ತಂತಿಯನ್ನು ಕೈಯ್ಯಿಂದ ಸ್ಪರ್ಶ ಮಾಡಿದ್ದು, ವಿದ್ಯುತ್ ಆಘಾತದಿಂದ ಸ್ಥಳದಲ್ಲಿ ಸಾವನ್ನಪ್ಪಿದ್ದಾನೆ. ತಕ್ಷಣ ಅಲ್ಲಿನ ನಿವಾಸಿಗಳು ಯಳಂದೂರು ಪೊಲೀಸ್ ಠಾಣೆ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಈ ಸಂಬಂಧ ಸಬ್ ಇನ್ಸ್‌ಪೆಕ್ಟರ್ ಆಕಾಶ್ ಘಟನಾ ಸ್ಥಳಕ್ಕೆ ತೆರಳಿ ಮಾಹಿತಿ ಪಡೆದುಕೊಂಡು ಮುಂದಿನ ಕ್ರಮ ವಹಿಸಿದ್ದಾರೆ.

ಜಲಜೀವನ್ ಮಿಷನ್ ಕಾಮಗಾರಿ ಪರಿಶೀಲನೆ

ಸಂ.ಕ.ಸಮಾಚಾರ ಚಾಮರಾಜನಗರ

ಜಿಲ್ಲೆಯ ಹನೂರು ತಾಲೂಕಿನ ಅಜ್ಜೀಪುರ, ಅಂಬಿಕಾಪುರ, ಕೌದಳ್ಳಿ ಗ್ರಾಮ ಪಂಚಾಯತಿಯ ಹೊಸದೊಡ್ಡಿ, ಸತ್ತಾರ್ ಮೇಡು, ಕುರಟ್ಟಿ ಹೊಸೂರು ಗ್ರಾಮ ಪಂಚಾಯತಿಯ ಎಲ್‌ಪಿಎಸ್ ಪ್ರಾಜೆಕ್ಟ್ ಎಫ್.ವಿಲೇಜ್ ಗ್ರಾಮಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಮೋನಾ ರೋತ್ ಭೇಟಿ ನೀಡಿ ಜಲ ಜೀವನ್ ಮಿಷನ್ ಯೋಜನೆ ಮತ್ತು ನರೇಗಾ ಯೋಜನೆಯ ಕಾಮಗಾರಿ ಪರಿಶೀಲಿಸಿದರು.

ಹನೂರು ತಾಲೂಕಿನಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ 236 ಕಾಮಗಾರಿ ತೆಗೆದುಕೊಂಡಿದ್ದು, ಈವರೆಗೆ 163 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದ್ದು, 98 ಕಾಮಗಾರಿಗಳನ್ನು ಗ್ರಾಮ ಪಂಚಾ